**ಸಾಕ್ಷಿಯನ್ನು ದಿಃ 26.07.2023 ರಂದು ಕರೆಸಿ ಪ್ರಮಾಣ ಬೋಧಿಸಲಾಯಿತು.**

ಮುಖ್ಯ ವಿಚಾರಣೆಃ 7 ನೇ ಪ್ರತಿವಾದಿ ಪರ ಶ್ರೀ.ಎ.ಎಂ.ಆರ್ ವಕೀಲರಿಂದಃ

ನಾನು ಈ ಪ್ರಕರಣದಲ್ಲಿ 7 ನೇ ಪ್ರತಿವಾದಿಯ ಪರ ಸಾಕ್ಷಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸುತ್ತಿದ್ದೇನೆ ಹಾಗೂ ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತವೆ ಮತ್ತು ಸಂಗತಿಗಳು ಸತ್ಯವಾಗಿರುತ್ತದೆ ಮತ್ತು ನಾನು ಅದಕ್ಕೆ ನನ್ನ ಸಹಿಯನ್ನು ಹಾಕಿರುತ್ತೇನೆ .

ಈಗ ತೋರಿಸಿದ ನಿಡಿ 4 ರ ದಾನಪತ್ರಕ್ಕೆ ನಾನು ಅನುಪ್ರಮಾಣಿತ ಸಾಕ್ಷಿದಾರನಾಗಿ ಸಹಿ ಮಾಡಿರುತ್ತೇನೆ. ಸಾಕ್ಷಿದಾರರು ದಾನಪತ್ರದಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಡಿ 4(ಎ) ಎಂದು ಗುರುತಿಸಲಾಯಿತು. ಸದರಿ ಪತ್ರಕ್ಕೆ ನನ್ನ ಸಮಕ್ಷಮ ದಾನ ನೀಡಿದ ವೆಂಕಟಪ್ಪ ಮತ್ತು ದಾನ ಸ್ವೀಕರಿಸಿದ ಶ್ರೀನಿವಾಸ್ ರವರು ಸಹಿ ಮಾಡಿರುತ್ತಾರೆ. ಸದರಿ ಸಹಿಗಳನ್ನು ಸಾಕ್ಷಿದಾರರು ನೋಡಿ ಗುರುತಿಸಿದ್ದು ಅವುಗಳನ್ನು ನಿಡಿ 4(ಬಿ ಮತ್ತು ಸಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

**sd/-**

**(ಕೇಶವಮೂರ್ತಿ.ಬಿ)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,**
**ಬಂಗಾರಪೇಟೆ**